ಖಾಲಿ ಇರುವ ಸಂಗೀತ ಮತ್ತು ಕಲಾ ಶಿಕ್ಷಕರ ಹುದ್ದೆಗಳನ್ನು ಗೌರವಧನದ ಮೇರೆಗೆ ನೇಮಕಾತಿ ಮಾಡಲು ಕ್ರಮ ತೆಗೆದುಕೊಳ್ಳಲಾಗುತ್ತಿದ್ದು, ಶೀಘ್ರದಲ್ಲಿ ಇವುಗಳನ್ನು ಭರ್ತಿ ಮಾಡಲಾಗುವುದು. ಮತ್ತು ಖಾಲಿ ಇರುವ ಸ್ಟಾಫ್ ನರ್ಸ್ ಹುದ್ದೆಯನ್ನು ಆರೋಗ್ಯ ಇಲಾಖೆಯಿಂದ ನಿಯೋಜನೆಯ ಮೇರೆಗೆ ನೇಮಕ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದು. ಗ್ರೂಪ್ 'ಡಿ' ಹುದ್ದೆಗಳನ್ನು ಭರ್ತಿ ಮಾಡಲು ಎಲ್ಲಾ ಮುಖ್ಯ ನಿರ್ವಹಣಾಧಿಕಾರಿಗಳು, ಜಿಲ್ಲಾಪಂಚಾಯತ್‌ರವರುಗಳಿಗೆ ನೇಮಕಾತಿ ನಿಯಮಾನುಸಾರ ಭರ್ತಿ ಮಾಡಲು ಕ್ರಮವ ಕೈಗೊಳ್ಳುವಂತೆ ಸೂಚನೆ ನೀಡಲಾಗಿದೆ.

ಬಾಗಲಕೋಟೆ ಜಿಲ್ಲೆಯಲ್ಲಿ ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿಯಿಂದ ಮಾರ್ಜಿನ್ ಮನಿ ವಿತರಣೆ

2683 (3171) ಶ್ರೀ ಪೂಜಾರ್ ಪಿ.ಹೆಚ್. (ಬಾಗಲಕೋಟೆ) :— ಮಾನ್ಯ ಸಣ್ಣ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಬಾಗಲಕೋಟೆ ಜಿಲ್ಲೆಯಲ್ಲಿ ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿಮತಿಯಿಂದ ಮಾರ್ಜಿನ್ ಮನಿ ಸಾಲ ಯೋಜನೆಯಡಿಯಲ್ಲಿ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡದ ಜನರಿಗೆ ಅಂಗವಿಕಲರಿಗೆ ಇನ್ನಿತರರಿಗೆ ಒಟ್ಟು ಸಹಾಯ ಪಡೆದುಕೊಂಡ ಫಲಾನುಭವಿಗಳ ಸಂಖ್ಯೆ ಎಷ್ಟು? ಎಷ್ಟು ಜನ ಈ ಯೋಜನೆಯಿಂದ ಸ್ವಾವಲಂಬಿಗಳಾಗಿದ್ದಾರೆ (ತಾಲ್ಲೂಕುವಾರು ವಿವರಗಳನ್ನು ನೀಡುವುದು)

ಆ) ಈ ಯೋಜನೆಯಡಿಯಲ್ಲಿ ಸಹಾಯ ಪಡೆದುಕೊಂಡ ಸ್ವಯಂಸೇವಾ ಸಂಸ್ಥೆಗಳೆಷ್ಟು? ಅವು ಯಾವುವು? (ತಾಲ್ಲೂಕುವಾರು ವಿವರಣೆ ನೀಡುವುದು)

ಇ) ಸ್ವಯಂ ಸೇವಾ ಸಂಸ್ಥೆಗಳಿಗೆ ಪ್ರಯೋಜನ ದೊರಕಿರದಿದ್ದರೆ ಕಾರಣಗಳೇನು? ವಿವರಣೆ ನೀಡುವುದು?

ಶ್ರೀ ಎಸ್.ಆರ್. ಕಾಶಪ್ಪನವರ್ (ಸಣ್ಣ ಕೈಗಾರಿಕಾ ಸಚಿವರು) :—

ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಮತಿಯಿಂದ ಬಾಗಲಕೋಟೆ ಜಿಲ್ಲೆಯಲ್ಲಿ ಮಾರ್ಜಿನ್ ಮನಿ ಯೋಜನೆಯಡಿಯಲ್ಲಿ ಧನ ಸಹಾಯ ಪಡೆದ ಫಲಾನುಭವಿಗಳ ತಾಲ್ಲೂಕುವಾರು ವಿವರವನ್ನು ಅನುಬಂಧದಲ್ಲಿ ನೀಡಲಾಗಿದೆ.

ಆ) ಬಾಗಲಕೋಟೆ ಜಿಲ್ಲೆಯಿಂದ ಈ ಯೋಜನೆಯಡಿ ಧನಸಹಾಯ ಪಡೆದ ಯಾವುದೇ ಸ್ವಯಂ ಸಂಸ್ಥೆಗಳು ಇರುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 3171ಕ್ಕೆ ಅನುಬಂಧ

ಮಾರ್ಜಿನ ಮನಿ ಯೋಜನೆಯಡಿಯಲ್ಲಿ ಧನಸಹಾಯ ಪಡೆದ ಘಟಕಗಳ ವಿವರವಾದ ತಪ್ಪೆ

ಕ್ರಮ ಸಂಖ್ಯೆ	ತಾಲ್ಲೂಕು	ಘಟಕಗಳ ಸಂಖ್ಯೆ	ಪರಿಶಿಷ್ಟ ಜಾತಿ	ಪರಿಶಿಷ್ಟ ವರ್ಗ	ಅಲ್ಪ-ಸಂಖ್ಯಾತರು	ಅಂಗವಿಕಲರು	ಮಹಿಳೆಯರು	ಸಾಮಾನ್ಯ
01	ಬಾದಾಮಿ	1	-	-	-	-	-	1
02	ಬಾಗಲಕೋಟೆ	2	-	-	1	-	-	1
03	ಬೀಳಗಿ	17	10	-	-	-	5	2
04	ಹುನಗುಂದ	3	-	-	-	-	1	2
05	ಜಮಖಂಡಿ	15	6	-	-	-	1	8
06	ಮುಧೋಳ	11	3	-	-	-	2	6
	ಒಟ್ಟು	49	19	-	1	-	9	20